1	2	3
12.	ಹಾಸನ	253
13.	ಚಿಕ್ಕಮಗಳೂರು	88
14.	ಕೊಡಗು	49
15.	ದಕ್ಷಿಣ ಕನ್ನಡ	62
16.	ಉಡುಪಿ	34
17.	ಬೆಳಗಾಂ	209
18.	ಬಿಜಾಪುರ	123
19.	ಬಾಗಲಕೋಟೆ	106
20.	ಧಾರವಾಡ	41
21.	ಗದಗ	35
22.	ಹಾವೇರಿ	48
23.	ಉತ್ತರ ಕನ್ನಡ	86
24.	ಗುಲ್ಬರ್ಗಾ	236
25.	ಬಳ್ಳಾರಿ	73
26.	ರಾಯಚೂರು	140
27.	ಕೊಪ್ಪಳ	83
28.	ಬೀದರ್	57
	ಒಟ್ಟು :	3070

ಚಳ್ಳಕೆರೆಯಲ್ಲಿರುವ ರವೀಂದ್ರ ಪದವಿ ಪೂರ್ವ ಕಾಲೇಜಿನ ಆಡಳಿತ ಮಂಡಳಿಯವರ ದುರಾಡಳಿತ

1950 (2611) ಶ್ರೀ ಹಾಲಪ್ಪ ಎ.ಬಿ. (ಹಡಗಲಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಚಿತ್ರದುರ್ಗ ಜಿಲ್ಲೆ ಚಳ್ಳಕೆರೆಯಲ್ಲಿರುವ ರವೀಂದ್ರ ವಿದ್ಯಾಸಂಸ್ಥೆ ಅಡಿಯಲ್ಲಿ ನಡೆಯುತ್ತಿರುವ ರವೀಂದ್ರ ಪದವಿ ಪೂರ್ವ ಕಾಲೇಜಿನಲ್ಲಿ ಉಪನ್ಯಾಸಕರ ಮೇಲೆ ಆಡಳಿತ ಮಂಡಳಿಯವರು ನಡೆಸಿರುವ ದೌರ್ಜನ್ಯ, ದಬ್ಬಾಳಿಕೆ, ಬೆದರಿಕೆ, ಕಾನೂನುಬಾಹಿರ ಚಟುವಟಿಕೆಗಳು ಹಾಗೂ ಕಿರುಕುಳಗಳು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ, ಸದರಿ ಆಡಳಿತ ಮಂಡಳಿಯ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಶ್ರೀ ಹೆಚ್.ಎಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಹೌದು.

ಆ) ಈ ಬಗ್ಗೆ ಚಳ್ಳಕೆರೆ ಪೋಲಿಸ್ ಠಾಣೆಯಲ್ಲಿ ಪಿರ್ಯಾದು ದಾಖಲು ಮಾಡಲಾಗಿದೆ. ದುರುಪಯೋಗದ ಹಣ ವಸೂಲಿಗಾಗಿ ಸದರಿ ಶಿಕ್ಷಣ ಸಂಸ್ಥೆಗೆ ಸೇರಿದ ಆಸ್ತಿ-ಪಾಸ್ತಿಗಳನ್ನು ಸರ್ಕಾರದ ಪರ ಜಪ್ತಿ ಮಾಡಲು ಪರಿಶೀಲಿಸಲಾಗುತ್ತಿದೆ. ಇದರಲ್ಲಿ ಭಾಗಿಗಳಾಗಿದ್ದವರನ್ನು ಕಂಡುಹಿಡಿಯಲು ಸಿ.ಓ.ಡಿ. ತನಿಖೆಗೆ ಆದೇಶಿಸಿದೆ. ಸಿ.ಓ.ಡಿ. ತನಿಖೆಯು ಪ್ರಗತಿಯಲ್ಲಿದೆ.

ಪೂರ್ವ ಪ್ರಾಥಮಿಕ ಶಿಕ್ಷಣ (ಎನ್.ಟಿ.ಟಿ.ಸಿ.) ವನ್ನು ರಾಜ್ಯದಲ್ಲಿ ಸ್ಥಗಿತಗೊಳಿಸಿರುವುದು

1951 (2358) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಪೂರ್ವ ಪ್ರಾಥಮಿಕ (ಎನ್.ಟಿ.ಟಿ.ಸಿ) ವನ್ನು ರಾಜ್ಯದಲ್ಲಿ ಸ್ಥಗಿತಗೊಳಿಸಿರುವುದು ನಿಜವೆ; ಇದಕ್ಕೆ ಕಾರಣಗಳೇನು;

ಆ) ಈ ಹಿಂದೆ ಪೂರ್ವ ಪ್ರಾಥಮಿಕ ಶಿಕ್ಷಣವನ್ನು ಪಡೆದಿರುವ ಎಷ್ಟು ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ;

ಇ) ಪ್ರಾಥಮಿಕ ಶಾಲೆಗಳಲ್ಲಿ ಎಷ್ಟು ಜನರನ್ನು ನೇಮಿಸಿಕೊಳ್ಳಲಾಗಿದೆ; ಮತ್ತು ಅಂಗನವಾಡಿ ಕೇಂದ್ರಗಳಲ್ಲಿ ಎಷ್ಟು ಜನರನ್ನು ನೇಮಿಸಿಕೊಳ್ಳಲಾಗಿದೆ; (ವಿವರ ನೀಡುವುದು)

ಈ) ಈ ಬಾರಿಯ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿ ಮಾಡಿಕೊಳ್ಳುವಾಗ ಪೂರ್ವ ಪ್ರಾಥಮಿಕ ಶಿಕ್ಷಣವನ್ನು ಪಡೆದಿರುವ ಎಷ್ಟು ಜನ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲಾಗುವುದು?

ಶ್ರೀ ಹೆಚ್.ಎಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಪೂರ್ವ ಪ್ರಾಥಮಿಕ ಶಿಕ್ಷಣವನ್ನು ರಾಜ್ಯದಲ್ಲಿ ಸ್ಥಗಿತಗೊಳಿಸಿರುವುದಿಲ್ಲ.

ಆ) ಈ ಹಿಂದೆ ಪೂರ್ವ ಪ್ರಾಥಮಿಕ ಶಿಕ್ಷಣವನ್ನು ಪಡೆದಿದ್ದ ಸುಮಾರು 3076 ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿತ್ತು. ಸರ್ಕಾರಿ ಪೂರ್ವ ಪ್ರಾಥಮಿಕ ಶಾಲೆಗಳಲ್ಲಿರುವ ಕಡೆಗಳಲ್ಲಿ ಮಹಿಳೆ ಮತ್ತು ಮಕ್ಕಳ ಕಲ್ಯಾಣ ಇಲಾಖಾ ವತಿಯಿಂದ ಅಂಗನವಾಡಿ ಕೇಂದ್ರವನ್ನು ನಡೆಸುತ್ತಿದ್ದು, ಅಂತಹ ಸ್ಥಳಗಳಲ್ಲಿ ಪೂರ್ವ ಪ್ರಾಥಮಿಕ ಶಾಲೆಗಳ ಅವಶ್ಯಕತೆ ಇಲ್ಲದಿದ್ದುದರಿಂದ, ಸರ್ಕಾರಿ ಪೂರ್ವ ಪ್ರಾಥಮಿಕ ಶಾಲೆಗಳನ್ನು 1999-2000ನೇ ಸಾಲಿನಿಂದ ನಿಲ್ಲಿಸಲಾಗಿದೆ. ಈ ಶಾಲೆಗಳಲ್ಲಿ ಕೆಲಸ ನಿರ್ವಹಿಸುತ್ತಿದ್ದ ಶಿಕ್ಷಕಿಯರುಗಳನ್ನು ಸರ್ಕಾರ ಕಿರಿಯ ಪ್ರಾಥಮಿಕ ಶಾಲೆಗಳಿಗೆ ನಿಯೋಜಿಸಲಾಗಿದೆ.

ಇ) ಸರ್ಕಾರದ ಪೂರ್ವ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಸುಮಾರು 3076 ಶಿಕ್ಷಕಿಯರನ್ನು ಪ್ರಾಥಮಿಕ ಶಾಲೆಗಳಿಗೆ ನಿಯೋಜನೆ ಮೇಲೆ ನೇಮಕ ಮಾಡಿಕೊಳ್ಳಲಾಗಿದೆ.